ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಎನ್.ಎಂ.ಎನ್. ವಕೀಲರಿಂದಃ-

36 ಹೆಚ್ಚುವರಿ ವೈದ್ಯಕೀಯ ಬಿಲ್ಲುಗಳನ್ನು ಹಾಜರುಮಾಡಿದ್ದು ಅವುಗಳನ್ನು ನಿಪಿ-11 ಎಂದು ಗುರುತಿಸಲಾಯಿತು.

ಮುಂದುವರೆದ ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ನಿಪಿ-11ರ ಬಿಲ್ಲುಗಳಿಗೆ ಸಂಬಂಧಿಸಿದಂತೆ ವೈದ್ಯರು ನೀಡಿರುವ ಸಲಹಾ ಚೀಟಿಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸಾಕ್ಷಿಯು ಅವರ ಜೊತೆಯಲ್ಲಿ ಇದ್ದ ಹೊರರೋಗಿ ಪುಸ್ತಕವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ನಿಪಿ-11ರ ಬಿಲ್ಲುಗಳನ್ನು ನಾನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಡಿ.ಎಲ್ ಅನ್ನು ನ್ಯಾಯಾಲಯಕ್ಕೆ ಇದುವರೆಗೂ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ ಬಿ.ಟಿ)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು